ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು,
ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ:ಹ5(1)ವರ್ಗ-07/2017-18 ದಿನಾಂಕ :15-06-2017

**ಅಧಿಕೃತ ಜ್ಞಾಪನ**

ವಿಷಯ: 2017-18ನೇ ಸಾಲಿನಲ್ಲಿ ಅಂತರ ಆಯುಕ್ತಾಲಯ ವರ್ಗಾವಣೆಗಳನ್ನು ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ :07-06-2013

2 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ :14-06-2013

3 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ :06-02-2014

4 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ದಿನಾಂಕ :27-04-2015.

5 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 63 ಸೇನೌವ 2015 ದಿನಾಂಕ: 01-10-2015.

6 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015 ದಿನಾಂಕ: 14-10-2015.

7 :- ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 2 ಸೇನೌವ 2017 ದಿನಾಂಕ : 27-03-2017

8 :- ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 12 ಸೇನೌವ 2017 ದಿನಾಂಕ: 03-05-2017

9:- ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 09-05-2017

-*****-

<u>ಪ್ರಸ್ತಾವನೆ:-</u>

ಉಲ್ಲೇಖ(1) ರಿಂದ (7) ರವರೆಗಿನ ಮಾರ್ಗಸೂಚಿಗಳನ್ನು ಅನುಸರಿಸಿ, 2017-18ನೇ ಸಾಲಿನ ವರ್ಗಾವಣೆಗಳನ್ನು ಜಾರಿಗೊಳಿಸುವಂತೆ ಉಲ್ಲೇಖ(8)ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ. ಉಲ್ಲೇಖಿತ (1) ರಿಂದ (7) ರವರೆಗಿನ ಸರ್ಕಾರದ ಆದೇಶಗಳಲ್ಲಿನ ಸೂಚನೆಗಳು ಹಾಗೂ ಮಾರ್ಗ ಸೂಚಿಗಳನ್ವಯ 2017-18ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿ ಹಾಗೂ ಸಿಬ್ಬಂದಿಗಳ ವಗಾವಣೆಗಳನ್ನು ಸಕ್ಷಮ ಪ್ರಾಧಿಕಾರಿಯವಾರು ಆಯಾಯ ಕಛೇರಿಗಳಲ್ಲಿ ವರ್ಗಾವಣೆಯನ್ನು ಮಾಡುವ ಬಗ್ಗೆ ಈ ಕಛೇರಿಯ ಉಲ್ಲೇಖಿತ (9) ರಲ್ಲಿನ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ ಆಯುಕ್ತಾಲಯದ ವರ್ಗಾವಣೆಯಡಿ ಧಾರವಾಡ ಮತ್ತು ಗುಲಬರ್ಗಾ ಆಯುಕ್ತಾಲಯದಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳು ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಯಡಿಯಲ್ಲಿ ವರ್ಗಾವಣೆಯನ್ನು ಕೋರಿರುವರಿಗೆ ವರ್ಗಾವಣೆಯನ್ನು ಮಾಡಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಪ್ರಾಧಿಕಾರವನ್ನು ಹೊಂದಿದ್ದು, 2017-18ನೇ ಸಾಲಿನಲ್ಲಿ ವರ್ಗಾವಣೆಗೆ ಕೋರಿ ಅರ್ಜಿ ಸಲ್ಲಿಸಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪೈಕಿ ಅರ್ಹರಿರುವರ ಅಂತಿಮ ಆಧ್ಯತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ಅಂತಿಮ ಆದ್ಯತಾ ಪಟ್ಟಿಯನ್ವಯ ದಿನಾಂಕ:12-06-2017 ರಂದು ಸ್ಥಳ ಆಯ್ಕೆಗಾಗಿ ಕೌನ್ಸಿಲಿಂಗ್ ನಡೆಸಲಾಗಿದೆ. ದಿನಾಂಕ:12-06-2017ರಂದು ನಡೆದ ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ

ಬೋಧಕೇತರ ವರ್ಗದ ಸಿಬ್ಬಂದಿಗಳು ಖುದ್ದಾಗಿ ಹಾಜರಾಗಿ ವರ್ಗಾವಣೆಗೆ ಸ್ಥಳವನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ವರ್ಗಾವಣೆಮಾಡಿ ಸ್ಥಳ ನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಆದೇಶ:-

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಬೋಧಕೇತರ ವೃಂದದ ಸಿಬ್ಬಂದಿಗಳನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಅಧಿಕಾರಿಗಳ/ ಸಿಬ್ಬಂಧಿಯ ಹೆಸರು, ಹುದ್ದೆ ಮತ್ತು ವಿಳಾಸ ಶ್ರೀ / ಶ್ರೀಮತಿ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಆಯ್ಕೆ ಮಾಡಿ ಕೊಂಡಂತೆ ವರ್ಗಾವಣೆ ಮಾಡಿರುವ ಹುದ್ದೆ ಮತ್ತು ಸ್ಥಳ |
|---|---|---|
| | ದ್ವಿತೀಯ ದರ್ಜೆ ಸಹಾಯಕರು | |
| 1 | ಶಿಲ್ಪ.ಇ. ಸರ್ಕಾರಿ ಪ್ರೌಢಶಾಲೆ ಶ್ರೀರಾಮರಂಗಾಪೂರ, ಹೊಸಪೇಟೆ ತಾಲ್ಲೂಕು, ಬಳ್ಳಾರಿ ಜಿಲ್ಲೆ | ಸರ್ಕಾರಿ ಪ್ರೌಢಶಾಲೆ, ಹೂವಿನಮಡು, ದಾವಣಗೆರೆ ದಕ್ಷಿಣ ವಲಯ, ದಾವಣಗೆರೆ ಜಿಲ್ಲೆ (ಶ್ರೀ ರಮೇಶ್ ಖಿಲಾರೆ ದ್ವಿ.ದ.ಸ ಇವರ ವಾರ್ಗವಣೆಯಿಂದ ತೆರವಾದ ಹುದ್ದೆ) |
| 2 | ಶ್ರೀ ಮೋಹನದಾಸ, ಸರ್ಕಾರಿ ಪ್ರೌಢಶಾಲೆ ಹೊಸಕಟ್ಟಿ, ಹಿರೇಕೆರೂರ ತಾಲ್ಲೂಕು, ಹಾವೇರಿ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ(ಹೊಸದಾಗಿ ಮಂಜೂರಾದ ಹುದ್ದೆ) |
| 3 | ಚಿಕ್ಕತಿಮ್ಮಮ್ಮ ಹೆಚ್.ಸಿ, ಸರ್ಕಾರಿ ಪ್ರೌಢಶಾಲೆ ಗುಡಿಸಾಗರ, ನವಲಗುಂದ ತಾಲ್ಲೂಕು, ಧಾರವಾಡ ಜಿಲ್ಲೆ | ಸರ್ಕಾರಿ ಪ್ರೌಢಶಾಲೆ, ಬನ್ನಿಮುಕ್ಕೋಡ್ಲು, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 4 | ಸವಿತ.ಕೆ. ಸರ್ಕಾರಿ ಪ್ರೌಢಶಾಲೆ ಬಸವಂತಪೂರ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ | ಸರ್ಕಾರಿ ಪ.ಪೂ.ಕಾಲೇಜು(ಪ್ರೌಢಶಾಲಾ ವಿಭಾಗ) ಸರಗೂರು, ಹೆಚ್.ಡಿ.ಕೋಟೆ ತಾಲ್ಲೂಕು ಮೈಸೂರು ಜಿಲ್ಲೆ. |
| 5 | ಗಂಗುಲಪ್ಪ, ಸರ್ಕಾರಿ ಪ್ರೌಢಶಾಲೆ ಬಲಕುಂದಿ ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ | ಸರ್ಕಾರಿ ಪ್ರೌಢಶಾಲೆ ಚಾಕವೇಲು ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ |
| 6 | ವಿನುತಾ, ಸರ್ಕಾರಿ ಪ್ರೌಢಶಾಲೆ ಬಂದರ, ಭಟ್ಕಳ ತಾಲ್ಲೂಕು, ಕಾರವಾರ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಮೂಡಬಿದ್ರೆ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಹೊಸದಾಗಿ ಮಂಜೂರಾದ ಹುದ್ದೆ) |

ಷರತ್ತುಗಳು:-

1. ಅಂತರ ಆಯುಕ್ತಾಲಯ ವರ್ಗಾವಣೆಯನ್ನು ಸಿಬ್ಬಂದಿಗಳ ಕೋರಿಕೆ ಆಧಾರದ ಮೇರೆಗೆ ವರ್ಗಾವಣೆ ಮಾಡಿರುವುದರಿಂದ ಅವರ ಜೇಷ್ಠತೆಯನ್ನು ಬೆಂಗಳೂರು ಆಯುಕ್ತಾಲಯದಡಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಪರಿಗಣಿಸಲಾಗುವುದು.
2. ಕೋರಿಕೆ ವರ್ಗಾವಣೆಯಾಗಿರುವುದರಿಂದ ವರ್ಗಾವಣೆಗೊಂಡ ಅಧಿಕಾರಿಗಳು/ ಸಿಬ್ಬಂದಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
3. ಅಧಿಕಾರಿಗಳ/ಸಿಬ್ಬಂದಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
4. ವರ್ಗಾವಣೆ ಹೊಂದಿರುವ ಅಧಿಕಾರಿಗಳ / ಸಿಬ್ಬಂದಿಗಳು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು/ಉಪನಿರ್ದೇಶಕರು(ಆಡಳಿತ) ರವರ ಅನುಮತಿ ಪಡೆದು ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳ ಒಳಗಾಗಿ ಬಿಡುಗಡೆ ಹೊಂದಲು ತಿಳಿಸಿದೆ.

5. ವರ್ಗಾವಣೆ ಹೊಂದಿರುವ ಅಧಿಕಾರಿಗಳು/ಸಿಬ್ಬಂಧಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.
6. ವರ್ಗಾವಣೆ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಧಿಕಾರಿ/ಸಿಬ್ಬಂದಿಯನ್ನೇ ಪೂರ್ಣ ಜವಾಬ್ದಾರರನ್ನಾಗಿ ಪರಿಗಣಿಸಿ, ತಪ್ಪು ಮಾಹಿತಿ ನೀಡಿದ ಕಾರಣಕ್ಕಾಗಿ ಅವರ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.
7. ಸದರಿ ನೌಕರರು ವರ್ಗಾವಣೆಗೆ ನೀಡಿರುವ ಕಾರಣದಂತೆ ಕೌನ್ಸಿಲಿಂಗ್‌ನಲ್ಲಿ ಆದ್ಯತೆಯನ್ನು ನೀಡಲಾಗಿದ್ದು, ಸದರಿಯವರು ಸ್ಥಳ ಆಯ್ಕೆ ಪ್ರಕ್ರಿಯೆಯ ಮುಖೇನ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ಆದ್ಯತೆಯಲ್ಲಿ ವ್ಯತ್ಯಾಸವಿದ್ದಲ್ಲಿ ಅವರನ್ನು ಬಿಡುಗಡೆಗೊಳಿಸದೇ ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

(ಎಸ್.ಕಾತ್ಯಾಯನಿ ದೇವಿ)
ಜಂಟಿ ನಿರ್ದೇಶಕರು(ಆಡಳಿತ)

ಇವರಿಗೆ :-

1. ಸಂಬಂಧಿಸಿದ ಶಾಲಾ / ಕಾಲೇಜು / ಕಛೇರಿ ಮುಖ್ಯಸ್ಥರಿಗೆ,
2. ಸಂಬಂದಿಸಿದ ಅಧಿಕಾರಿ / ಸಿಬ್ಬಂದಿಗಳಿಗೆ

<u>ಪ್ರತಿಯನ್ನು:-</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಹಾಗೂ ಧಾರವಾಡ.
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
4. ಸಂಬಂಧಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
5. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ. ಮೈಸೂರು, ಬೆಳಗಾವಿ ಹಾಗೂ ಕಲಬುರಗಿ.
6. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರಿಗೆ(ಆಡಳಿತ)
8. ಸಂಬಂಧಿಸಿದ ತಾಲ್ಲೂಕು ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
9. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
10. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
11. ಸಂಬಂಧಿಸಿದ ಶಾಲಾ / ಕಾಲೇಜುಗಳ ಮುಖ್ಯಸ್ಥರುಗಳಿಗೆ.
12. ಕಛೇರಿ ಪ್ರತಿ.